# ಕನ್ನಡ ಸಾಹಿತ್ಯ ಪರಿಷತ್ತು

ಪಂಪ ಮಹಾಕವಿ ರಸ್ತೆ, ಚಾಮರಾಜಪೇಟೆ, ಬೆಂಗಳೂರು – ೫೬೦ ೦೧೮
ದೂರವಾಣಿ : ೦೮೦ ೨೬೬೧೨೯೯೧, ೨೬೬೨೩೫೮೪ ಫ್ಯಾಕ್ಸ್ : ೨೬೫೨೩೮೬೭
http://www.kasapa.in e-mail : kannadaparishattu@gmail.com


ಕ್ರಮಸಂಖ್ಯೆ : ಕಸಾಪ / **ಪ್ರಕಟಣೆ**/ ೨೦೨೩-೨೪ ದಿನಾಂಕ : ೦೬-೧೨-೨೦೨೩

*ಇವರಿಗೆ*
**ಸಂಪಾದಕರು / ಮುಖ್ಯ ವರದಿಗಾರರು**
.................................................ಬೆಂಗಳೂರು

<u>ಮಾಧ್ಯಮ ಆಹ್ವಾನ ಹಾಗೂ ಪ್ರಕಟಣೆಯ ಕೃಪೆಗಾಗಿ</u>

## ಡಿ.೮ ರಂದು ಡಾ. ಸಿದ್ದಲಿಂಗಯ್ಯ ಸಾಹಿತ್ಯ ದತ್ತಿ ಪ್ರಶಸ್ತಿ ಪ್ರದಾನ

ಬೆಂಗಳೂರು: **ಕನ್ನಡ ಸಾಹಿತ್ಯ ಪರಿಷತ್ತು ಡಾ. ಸಿದ್ದಲಿಂಗಯ್ಯ ಸಾಹಿತ್ಯ ದತ್ತಿ ಪ್ರಶಸ್ತಿ ಪ್ರದಾನ ಕಾರ್ಯಕ್ರಮವನ್ನು ಡಿಸೆಂಬರ್ ೦೮ ಶುಕ್ರವಾರ ಸಂಜೆ ೦೫.೦೦ ಗಂಟೆಗೆ ಚಾಮರಾಜಪೇಟೆಯಲ್ಲಿರುವ ಕನ್ನಡ ಸಾಹಿತ್ಯ ಪರಿಷತ್ತಿನ ಶ್ರೀ ಕೃಷ್ಣರಾಜ ಪರಿಷತ್ತಿನ ಮಂದಿರದಲ್ಲಿ ಹಮ್ಮಿಕೊಂಡಿದೆ ಎಂದು ಕನ್ನಡ ಸಾಹಿತ್ಯ ಪರಿಷತ್ತು ಪ್ರಕಟಣೆಯಲ್ಲಿ ತಿಳಿಸಿದೆ.**

ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ನಾಡೋಜ **ಡಾ. ಮಹೇಶ ಜೋಶಿ** ಅವರ ಅಧ್ಯಕ್ಷತೆಯಲ್ಲಿ ನಡೆಯಲಿರುವ ಕಾರ್ಯಕ್ರಮದಲ್ಲಿ , ಬೆಂಗಳೂರಿನ ಖ್ಯಾತ ಸಾಹಿತಿಗಳಾಗಿರುವ **ಡಾ. ಮೂಡ್ನಾಕೂಡು ಚಿನ್ನಸ್ವಾಮಿ** ಅವರು ಭಾಗವಹಿಸಿ ಪ್ರಶಸ್ತಿ ಪ್ರದಾನ ಮಾಡಲಿದ್ದಾರೆ. **ಶ್ರೀಮತಿ ರಮಾಕುಮಾರಿ ಸಿದ್ದಲಿಂಗಯ್ಯ** ಅವರು ಕಾರ್ಯಕ್ರಮದಲ್ಲಿ ಉಪಸ್ಥಿತರಿರಲಿದ್ದಾರೆ.

**೨೦೧೮ ನೆಯ ಸಾಲಿನ ಡಾ. ಸಿದ್ದಲಿಂಗಯ್ಯ ಸಾಹಿತ್ಯ ದತ್ತಿ ಪ್ರಶಸ್ತಿಯನ್ನು ಕೋಲಾರದ ಶ್ರೀ ಕೋಟಿಗಾನಹಳ್ಳಿ ರಾಮಯ್ಯ ಅವರಗೆ, ೨೦೧೯ ನೆಯ ಸಾಲಿನ ಪ್ರಶಸ್ತಿಯನ್ನು ಕಲಬುರಗಿಯ ಡಾ. ಎಚ್.ಟಿ. ಪೋತೆಯವರಿಗೆ, ಶ್ರೀಮತಿ ೨೦೨೦ ನೆಯ ಸಾಲಿನ ಪ್ರಶಸ್ತಿಯನ್ನು ವಿಜಯಪುರದ ಇಂದುಮತಿ ಲಮಾಣಿ ಅವರಿಗೆ, ೨೦೨೧ನೆಯ ಸಾಲಿನ ಪ್ರಶಸ್ತಿಯನ್ನು ಕೋಲಾರ ಡಾ. ಕಾ.ವೆಂ. ಶ್ರೀನಿವಾಸಮೂರ್ತಿ ಅವರಿಗೆ, ೨೦೨೨ನೆಯ ಸಾಲಿನ ಪ್ರಶಸ್ತಿಯನ್ನು ಗದಗ ಡಾ. ಅರ್ಜುನ ಗೊಳಸಂಗಿ ಅವರಿಗೆ ಹಾಗೂ ೨೦೨೩ನೆಯ ಸಾಲಿನ ಡಾ. ಸಿದ್ದಲಿಂಗಯ್ಯ ಸಾಹಿತ್ಯ ದತ್ತಿ ಪ್ರಶಸ್ತಿಯನ್ನು ಹಾಸನ ಶ್ರೀ ನಾಗರಾಜ್ ಹೆತ್ತೂರು ಅವರಿಗೆ ಪ್ರಸಸ್ತಿ** ಪ್ರದಾನ ಮಾಡಲಾಗುವುದು.

ಈ ಕಾರ್ಯಕ್ರಮಕ್ಕೆ ತಮ್ಮ ಸಂಸ್ಥೆಯ ಪರವಾಗಿ ಪ್ರತಿನಿಧಿಸುವ ವರದಿಗಾರರನ್ನು ಹಾಗೂ ಛಾಯಾಚಿತ್ರಗ್ರಾಹಕರನ್ನು ಕಳಿಸಿ ವರದಿ ಪ್ರಕಟಿಸುವಂತೆ ಕೋರಲಾಗಿದೆ.

**ವಿ.ಸೂ: ಎಲ್ಲರ ಸಮಯಕ್ಕೆ ಗೌರವ ಸಲ್ಲಿಸುತ್ತ ಕಾರ್ಯಕ್ರಮ ನಿಗದಿಯಾದ ಸಮಯಕ್ಕೆ ಸರಿಯಾಗಿ ಆರಂಭಿಸಿ ಸರಿಯಾದ ಸಮಯಕ್ಕೆ ಮುಕ್ತಾಯ ಮಾಡಲಿದ್ದೇವೆ.**

**ಶ್ರೀನಾಥ್ ಜೆ.**
**ಮಾಧ್ಯಮ ಸಲಹೆಗಾರರು**
**ಕನ್ನಡ ಸಾಹಿತ್ಯ ಪರಿಷತ್ತು**
**ಬೆಂಗಳೂರು**